# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** : 90(716+740+741)

**ಸದಸ್ಯರ ಹೆಸರು** : ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಹಾಗೂ ಶ್ರೀ ಎಸ್.ವಿ. ಸಂಕನೂರ್ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 19.09.2022

**ಉತ್ತರಿಸುವ ಸಚಿವರು** : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಜನವರಿ-2016 ರಿಂದ ಮಾರ್ಚ್-2022ರವರೆಗೆ ರಾಜ್ಯ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ ಹುದ್ದೆಗಳೆಷ್ಟು;(ವಿವರ ನೀಡುವುದು)</td><td>ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಪ್ರಸ್ತುತ ಅಗತ್ಯಕ್ಕಿಂತ ಹೆಚ್ಚುವರಿ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದು, ಹೆಚ್ಚುವರಿ ಅನುದಾನಿತ ಹುದ್ದೆಗಳು ಖಾಲಿಯಾದಲ್ಲಿ ಅಥವಾ ಒಂದು ಖಾಸಗಿ ಪ್ರಾಥಮಿಕ ಶಾಲೆಯನ್ನು ಸಹಾಯನುದಾನಕ್ಕೆ ಒಳಪಡಿಸಿದ ಪ್ರಥಮ ಸಂದರ್ಭದಲ್ಲಿ ಕೆಲವು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸದೇ ಉಳಿದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರುಗಳಿಂದ ತುಂಬಿಕೊಳ್ಳಬೇಕೆ ಹೊರತು ನೇರ ನೇಮಕಾತಿ ಮಾಡಿಕೊಳ್ಳತಕ್ಕದ್ದಲ್ಲ ಎಂಬುದಾಗಿ ಸರ್ಕಾರದ ಸುತ್ತೋಲೆ ಸಂಖ್ಯೆ ಇಡಿ 267 ಪಿಎಂಸಿ 2007 ದಿ: 12-10-2017 ರಲ್ಲಿ ಆದೇಶಿಸಲಾಗಿದೆ.<br>ಜನವರಿ-2016 ರಿಂದ ಮಾರ್ಚ್ 2022 ರವರೆಗೆ ರಾಜ್ಯದ ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜಿನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಆಗಿರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ.<br><table><tr><th>ಕ್ರ.ಸಂ</th><th>ಆಯುಕ್ತಾಲಯ</th><th>ಖಾಲಿ ಹುದ್ದೆಗಳ ಮಾಹಿತಿ</th></tr><tr><td>1.</td><td>ಆಯುಕ್ತರು, ಸಾ.ಶಿ.ಇ, ಬೆಂಗಳೂರು</td><td>3015</td></tr><tr><td>2.</td><td>ಅಪರ ಆಯುಕ್ತರು, ಸಾ.ಶಿ.ಇ, ಧಾರವಾಡ</td><td>2267</td></tr><tr><td>3.</td><td>ಅಪರ ಆಯುಕ್ತರು, ಸಾ.ಶಿ.ಇ, ಕಲಬುರಗಿ</td><td>600</td></tr><tr><td>4.</td><td>ಪದವಿಪೂರ್ವ ನಿರ್ದೇಶನಾಲಯ</td><td>3376</td></tr></table><br>ಪ್ರಸ್ತುತ ಮರು ಹೊಂದಾಣಿಕೆ ಮಾಡಲು ಹುದ್ದೆಗಳ ವಿವರಗಳನ್ನು ಶಾಲಾ ಆಡಳಿತ ಮಂಡಳಿಗಳಿಂದ ಪಡೆದು ಅಗತ್ಯ ಕ್ರಮ ಕೈಗೊಳ್ಳಲಾಗುವುದು.</td></tr>
<tr><td>ಆ</td><td>ಈ ಹಿಂದೆ ಶಿಕ್ಷಕರ ಮತ್ತು ಉಪನ್ಯಾಸಕರ ನೇಮಕಾತಿಗೆ ನೀಡಿದ್ದ ತಡೆಯಾಜ್ಞೆಯನ್ನು ಆರ್ಥಿಕ ಇಲಾಖೆ ಹಿಂದಕ್ಕೆ ತೆಗೆದುಕೊಳ್ಳಲಾಗಿದೆಯೇ; (ಪ್ರತಿ ನೀಡುವುದು)</td><td rowspan="2">ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015 ರವರೆಗೆ ನಿವೃತ್ತಿ, ನಿಧನ, ರಾಜಿನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಮಿತವ್ಯಯ ಸಡಿಲಿಸಿ, ಆರ್ಥಿಕ ಇಲಾಖೆ ಅನುಮತಿ ನೀಡಿರುತ್ತದೆ. ಅದರನ್ವಯ ದಿನಾಂಕ:31.12.2015ರವರೆಗೆ ನಿವೃತ್ತಿ, ನಿಧನ, ರಾಜಿನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>ಅನುಮತಿ ನೀಡಿರುವ ಪ್ರತಿಗಳನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ..</td></tr>
<tr><td>ಇ</td><td>ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕಾಲಮಿತಿಯಲ್ಲಿ ಅನುಮತಿ ನೀಡಲಾಗುತ್ತದೆ;</td></tr>
</table>

ಈ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ನಿಧನ, ನಿವೃತ್ತಿ ಹಾಗೂ ರಾಜೀನಾಮೆಯಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಇಂದಿನವರೆಗೆ ಅನುಮತಿ ನೀಡಲು ಸರ್ಕಾರದ ನಿಲುವೇನು;

ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:01.01.2016 ರಿಂದ 31.12.2020ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಮೂರು ಆಯುಕ್ತಾಲಯ, ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಪದವಿಪೂರ್ವ ನಿರ್ದೇಶನಾಲಯದಿಂದ ಮಾಹಿತಿ ಪಡೆಯಲು ಕ್ರಮವಹಿಸಲಾಗುತ್ತಿದೆ. ಮಾಹಿತಿ ಪಡೆದು ಕ್ರೂಢೀಕರಿಸಿ ಆರ್ಥಿಕ ಇಲಾಖೆಯ ಸಹಮತಿ ಪಡೆಯಲು ಕ್ರಮಕೈಗೊಳ್ಳಲಾಗುವುದು.

ಉ 2015ಕ್ಕೂ ಮುನ್ನ ಅನುದಾನಿತ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಈಗಾಗಲೇ ಅನುಮತಿ ನೀಡಿ ವೇತನಾನುದಾನಕ್ಕೊಳಪಟ್ಟಿರುವ ಹುದ್ದೆಗಳೆಷ್ಟು; ಇಲಾಖಾ ಅನುಮತಿ ನೀಡಿ ಇದುವರೆವಿಗೆ ವೇತನಾನುದಾನಕ್ಕೆ ಒಳಪಡಿಸದಿರುವ ಹುದ್ದೆಗಳೆಷ್ಟು?

ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015ರ ಪೂರ್ವದಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿಸಿರುವ, ವೇತನಾನುದಾನಕ್ಕೆ ಒಳಪಡಿಸಿರುವ ಹಾಗೂ ಬಾಕಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ.

| ಕ್ರಮ ಸಂಖ್ಯೆ | ಆಯುಕ್ತಾಲಯದ ಹೆಸರು | ಅನುಮತಿ ನೀಡಿರುವ ಹುದ್ದೆಗಳ ಸಂಖ್ಯೆ | ಸಹಾಯಾನುದಾನಕ್ಕೆ ಒಳಪಡಿಸಿರುವ ಹುದ್ದೆಗಳ ಸಂಖ್ಯೆ | ಆಡಳಿತ ಮಂಡಳಿಯಿಂದ ಪ್ರಸ್ತಾವನೆ ಸ್ವೀಕೃತವಾಗದೇ ಬಾಕಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಬೆಂಗಳೂರು | 2127 | 1243 | 884 |
| 2 | ಧಾರವಾಡ | 1141 | 954 | 187 |
| 3 | ಕಲಬುರಗಿ | 365 | 195 | 170 |
| 4 | ಪದವಿಪೂರ್ವ ನಿರ್ದೇಶನಾಲಯ | 1008 | 382 | 626* |
| | ಒಟ್ಟು | 4641 | 2774 | 1867 |

*ದಿನಾಂಕ:31.12.2015ಕ್ಕೂ ಪೂರ್ವದಲ್ಲಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಬಾಕಿ ಉಳಿದಿರುವ 626 ಹುದ್ದೆಗಳಲ್ಲಿ ಆಡಳಿತ ಮಂಡಳಿಗಳಿಂದ 455 ಹುದ್ದೆಗಳಿಗೆ ಪ್ರಸ್ತಾವನೆಗಳನ್ನು ಸಲ್ಲಿಸಿರುವುದಿಲ್ಲ. ಉಳಿದಂತೆ 171 ಹುದ್ದೆಗಳು ವಿವಿಧ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

ಊ ಡಿಸೆಂಬರ್-2015ರವರೆಗೆ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ ಎಲ್ಲಾ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಯಾವಾಗ ಅನುಮತಿ ನೀಡಲಾಗುತ್ತದೆ?

ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015ರವರೆಗೆ ನಿವೃತ್ತಿ, ನಿಧನ, ರಾಜಿನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ಮುಂದುವರಿಸಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ಇಪಿ 440 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ
ಸಕಾಲ ಸಚಿವರು

ಅನುಬಂಧ - I

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 59 ಎಸ್‌ಇಎಸ್ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 30.06.2022

**ಇಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ
ಬಹುಮಹಡಿಗಳ ಕಟ್ಟಡ,
ಬೆಂಗಳೂರು.

**ಇವರಿಗೆ :**
1) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖ, ಬೆಂಗಳೂರು.
2) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ.

**ಮಾನ್ಯರೆ,**

**ವಿಷಯ:** ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:31.12.2015 ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಬಗ್ಗೆ.

**ಉಲ್ಲೇಖ:**
1. ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020, ದಿನಾಂಕ:10.06.2020.
2. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 507 ವೆಚ್ಚ-8/2022, ದಿನಾಂಕ:23.06.2022.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-1ರ ಸುತ್ತೋಲೆಯಲ್ಲಿ ಕೋವಿಡ್-19ರಿಂದಾಗಿ ಉದ್ಭವಿಸಿದ ಆರ್ಥಿಕ ಸಂಕಷ್ಟದ ಹಿನ್ನೆಲೆಯಲ್ಲಿ ಆರ್ಥಿಕ ಮಿತವ್ಯಯ ಸಾಧಿಸುವ ದೃಷ್ಟಿಯಿಂದ 2020-21ನೇ ಸಾಲಿನಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಹೊಸದಾಗಿ ವೇತನಾನುದಾನಕ್ಕೆ ಒಳಪಡಿಸದಂತೆ ಹಾಗೂ ಈಗಾಗಲೇ ವೇತನಾನುದಾನಕ್ಕೆ ಒಳಪಟ್ಟ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದಂತೆ ಸೂಚನೆಗಳನ್ನು ನೀಡಲಾಗಿತ್ತು.

ಉಲ್ಲೇಖ(2)ರ ದಿನಾಂಕ: 23.06.2022ರ ಅನಧಿಕೃತ ಟಿಪ್ಪಣಿಯಲ್ಲಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:31.12.2015 ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇತರ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ಮುಂದುವರಿಸಲು ಆರ್ಥಿಕ ಇಲಾಖೆಯು ಸಹಮತಿಸಿರುತ್ತದೆ.

ಈ ಹಿನ್ನೆಲೆಯಲ್ಲಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:31.12.2015 ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ಮುಂದುವರಿಸಲು ನಿಯಮಾನುಸಾರ ಕ್ರಮಕೈಗೊಳ್ಳುವಂತೆ ತಮಗೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,
V.S. 31/6/2022

**(ವಿ. ಶ್ರೀನಿವಾಸಮೂರ್ತಿ)**
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ.(ಪ್ರೌಢ)
o/c

1/7/2022

-101 +101 +140 + +441) ಅನುಬಂಧ -20

**ಕರ್ನಾಟಕ ಸರ್ಕಾರ**

946

ಸಂಖ್ಯೆ:ಇಪಿ 57 ಟಿಪಿಯು 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:30/07/2022.

ಇವರಿಂದ:-
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,
6ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು-560 001.

E-4524010/2022
04/08/2022

ಇವರಿಗೆ:-
ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಮಲ್ಲೇಶ್ವರಂ 18ನೇ ಕ್ರಾಸ್,
ಬೆಂಗಳೂರು.

ಮಾನ್ಯರೆ,

ವಿಷಯ:- ದಿನಾಂಕ:31-12-2015ರವರೆಗೆ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಇನ್ನಿತರ ಕಾರಣಗಳಿಂದ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:- 1) ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020 ದಿನಾಂಕ:10-06-2020.
2) ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 507 ವೆಚ್ಚ-8/2022 ದಿನಾಂಕ:23-06-2022.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಸುತ್ತೋಲೆಯಲ್ಲಿ ಕೋವಿಡ್-19ರಿಂದ ಉದ್ಭವಿಸಿದ ಆರ್ಥಿಕ ಸಂಕಷ್ಟದ ಹಿನ್ನೆಲೆಯಲ್ಲಿ ಆರ್ಥಿಕ ಮಿತವ್ಯಯ ಸಾಧಿಸುವ ದೃಷ್ಟಿಯಿಂದ 2020-21ನೇ ಸಾಲಿನಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಹೊಸದಾಗಿ ಅನುದಾನಕ್ಕೆ ಒಳಪಡಿಸದಂತೆ ಹಾಗೂ ಈಗಾಗಲೇ ವೇತನಾನುದಾನಕ್ಕೆ ಒಳಪಟ್ಟ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದಂತೆ ಸೂಚನೆಗಳನ್ನು ನೀಡಲಾಗಿತ್ತು.

ಉಲ್ಲೇಖ(2)ರ ಅನಧಿಕೃತ ಟಿಪ್ಪಣಿಯಲ್ಲಿ ದಿನಾಂಕ:31-12-2015ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಇತ್ಯಾದಿ ಕಾರಣಗಳಿಂದಾಗಿ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ಮುಂದುವರಿಸಲು ಆರ್ಥಿಕ ಇಲಾಖೆಯು ಸಹಮತಿಸಿರುತ್ತದೆ.

ಈ ಹಿನ್ನೆಲೆಯಲ್ಲಿ ಅನುದಾನಿತ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:31-12-2015ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಇತ್ಯಾದಿ ಕಾರಣಗಳಿಂದಾಗಿ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ಮುಂದುವರೆಸಲು ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ತಮಗೆ ತಿಳಿಸಲು ನಾನು ನಿರ್ದೇಶಿತಳಾಗಿದ್ದೇನೆ.

ತಮ್ಮ ನಂಬುಗೆಯ,
Padmini S.N
(ಪದ್ಮಿನಿ ಎಸ್.ಎನ್.) 30/7/22
ಸರ್ಕಾರದ ಅಧೀನ ಕಾರ್ಯದರ್ಶಿ,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,